53

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. ರವರ ಗಮನ ಸೆಳೆಯುವ ಸೂಚನೆ ನಿಯಮ - 330 ಕ್ಕೆ ಉತ್ತರ.

**ಪ್ರಶ್ನೆ** :- ಕೈದಿಗಳ ಮನಃಪರಿವರ್ತನೆಯ ಕೇಂದ್ರುವಾಗಬೇಕಿದ್ದ ಪರಪ್ಪನ ಅಗ್ರಹಾರ ಜೈಲು ಅಪರಾಧಿಗಳ ಮೋಜು, ಮಸ್ತಿಯ ತಾಣವಾಗಿ ಮಾರ್ಪಟ್ಟಿದ್ದು, ಜೈಲಿನ ಒಳಗಿರುವ ಕೈದಿಗಳೇ ಅಕ್ರಮವಾಗಿ ದೊಡ್ಡ ಪ್ರಮಾಣದಲ್ಲಿ ವೈನ್ (ಮದ್ಯ ) ತಯಾರಿಸುತ್ತಿದ್ದು, ಇಡೀ ಜೈಲು ಆವರಣವೇ 'ಮದ್ಯಾಲಯ' ವಾಗಿ ಮಾರ್ಪಟ್ಟಿರುವುದು ಅತ್ಯಂತ ನಾಚಿಕೆಗೇಡಿನ ಸಂಗತಿಯಾಗಿದೆ.

ಜೈಲಿನ ಒಳಗಿರುವ ಕೈದಿಗಳೇ ಅಕ್ರಮವಾಗಿ ತಯಾರಿಸಿದ ಮಧ್ಯವನ್ನು ತಾವು ಬಳಸುವುದರ ಜೊತೆಗೆ ಈ ಅಕ್ರಮ ಮಧ್ಯವನ್ನು ಕೆಲವು ಕೈದಿಗಳು ಜೈಲಿನ ಒಳಗೆ ಮಾರಾಟ ಮಾಡುತ್ತಿರುವ ಆರೋಪ ಕೇಳಿ ಬಂದಿದ್ದು, ಈ ರೀತಿಯ ಅಕ್ರಮ ಚಟುವಟಿಕೆಗಳನ್ನು ತಡೆಯಲು ಸರ್ಕಾರ ಇದುವರೆಗೆ ಯಾವುದೇ ಕಠಿಣ ಕ್ರಮಗಳನ್ನು ಕೈಗೊಳ್ಳಲು ಸಂಪೂರ್ಣವಾಗಿ ವಿಫಲವಾಗಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

1. **ಉತ್ತರ** :- ದಿನಾಂಕ: 08.11.2025 ಮತ್ತು 09.11.2025ರಂದು ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಸಜಾಬಂದಿಗಳು ಹಾಗೂ ವಿಚಾರಣಾಧೀನ ಕೈದಿಗಳು ಮದ್ಯದ ಪಾರ್ಟಿ, ನೃತ್ಯ, ಮೊಬೈಲ್ ಫೋನ್ ಬಳಕೆ, ಸೇರಿದಂತೆ ಅನೇಕ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾಗಿರುವುದಾಗಿ ವಿವಿಧ ದೃಶ್ಯ ಮಾಧ್ಯಮಗಳಲ್ಲಿ ಪ್ರಸಾರವಾಗಿರುವ ಪ್ರಕರಣಗಳ ಕುರಿತು, ಈ ಕೆಳಕಂಡಂತೆ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಸೂಕ್ತ ಕಾನೂನು ಕ್ರಮವನ್ನು ಜರುಗಿಸುವ ಸಂಬಂಧ ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

| ಕ್ರ ಸಂ | ಪ್ರಕರಣ ಸಂಖ್ಯೆ & ದಿನಾಂಕ | ಷರಾ |
|---|---|---|
| 1 | NCR. No: 050/2025, ದಿನಾಂಕ: 08.11.2025 | Cr. No: 0331/2025 ದಿನಾಂಕ: 20.11.2025 |
| 2 | NCR. No: 051/2025 ದಿನಾಂಕ: 08.11.2025 | Cr. No: 0332/2025 ದಿನಾಂಕ: 20.11.2025 |
| 3 | NCR. No: 052/2025 ದಿನಾಂಕ: 08.11.2025 | Cr. No: 0333/2025 ದಿನಾಂಕ: 20.11.2025 |
| 4 | NCR. No: 053/2025 ದಿನಾಂಕ: 08.11.2025 | Cr. No: 0334/2025 ದಿನಾಂಕ: 20.11.2025 |
| 5 | Cr. No: 0321/2025 ದಿನಾಂಕ: 10.11.2025 | - |

2. ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಕೈದಿಗಳಿಂದ ಮದ್ಯ ತಯಾರಿಕೆ / ಕಾರಾಗೃಹದಲ್ಲಿ ವೈನ್ ತಯಾರಿಕೆ ಎಂಬ ಶೀರ್ಷಿಕೆಯಡಿ ದಿನ ಪತ್ರಿಕೆಗಳಲ್ಲಿ ದಿನಾಂಕ: 27.11.2025ರಂದು ಪ್ರಕಟವಾದ ಸುದ್ದಿಯ ಕುರಿತು ಕೂಲಂಕಷವಾಗಿ ಪರಿಶೀಲಿಸಿ,

ವಿಚಾರಣೆಯನ್ನು ನಡೆಸಿ, ಪ್ರಾಥಮಿಕ ವಿಚಾರಣಾ ವರದಿಯನ್ನು ಸಲ್ಲಿಸುವಂತೆ ಕಾರಾಗೃಹಗಳ ಉಪಮಹಾ ನಿರೀಕ್ಷಕರು, ದಕ್ಷಿಣ ವಲಯ, ಬೆಂಗಳೂರು ರವರಿಗೆ ಈ ಕಛೇರಿಯ ಜ್ಞಾಪನ ಸಂಖ್ಯೆ: DGPCSB/JDLU/SEC2/44/2025-JUDCL, ದಿನಾಂಕ: 28.11.2025 ರಲ್ಲಿ ಈಗಾಗಲೇ ಸೂಚಿಸಲಾಗಿರುತ್ತದೆ.

3. ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ನಿಷೇದಿತ ವಸ್ತುಗಳ ಬಳಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯ ವತಿಯಿಂದ ಅನಿರೀಕ್ಷಿತ ತಪಾಸಣೆಗಳನ್ನು ನಡೆಸಲು ಸಂಬಂಧಪಟ್ಟ ಪೊಲೀಸ್ ಆಯುಕ್ತರು / ಜಿಲ್ಲಾ ಪೊಲೀಸ್ ಅಧೀಕ್ಷಕರುಗಳು ಹಾಗೂ ಎಲ್ಲಾ ಕಾರಾಗೃಹಗಳ ಮುಖ್ಯ ಅಧೀಕ್ಷಕರು / ಅಧೀಕ್ಷಕರುಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಗಿರುತ್ತದೆ.

4. ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 187 ಪಿಆರ್‌ಎ 2021, ದಿನಾಂಕ: 28.03.2022ರಲ್ಲಿ ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ಬಂದಿಗಳು ಮೊಬೈಲ್ ಫೋನ್‌ಗಳನ್ನು ಹಾಗೂ ಸಂವಹನ ಉದ್ದೇಶಕ್ಕಾಗಿ ಇತರೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ ಸಾಧನಗಳ ಬಳಕೆಯನ್ನು ಮಾಡದಂತೆ ಮತ್ತು ಯಾವುದೇ ರೀತಿಯ ಮಾದಕ ವಸ್ತುಗಳು, ನಿಷೇದಿತ ವಸ್ತುಗಳ ಬಳಕೆಯನ್ನು ಮಾಡದಂತೆ ತಡೆಗಟ್ಟುವ ನಿಟ್ಟಿನಲ್ಲಿ, ಸೂಕ್ತ ಕಾನೂನು ಕ್ರಮವನ್ನು ಜರುಗಿಸುವ ಸಂಬಂಧ, ಕರ್ನಾಟಕ ಕಾರಾಗೃಹಗಳ ನಿಯಮಗಳು-1974ರ ನಿಯಮ 42(3)ರಲ್ಲಿನ ನಿಷೇದಿತ ವಸ್ತುಗಳ ಪಟ್ಟಿಗೆ (ಕರ್ನಾಟಕ ಕಾರಾಗೃಹ (ತಿದ್ದುಪಡಿ) ನಿಯಮಗಳು-2022) ಅವಶ್ಯಕ ತಿದ್ದುಪಡಿಯನ್ನು ಮಾಡಲಾಗಿರುತ್ತದೆ.

5. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 09 ಶಾಸನ 2022, ದಿನಾಂಕ: 05.04.2022ರಲ್ಲಿ ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ಬಂದಿಗಳು ಮೊಬೈಲ್ ಫೋನ್‌ಗಳನ್ನು ಹಾಗೂ ಸಂವಹನ ಉದ್ದೇಶಕ್ಕಾಗಿ ಇತರೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ ಸಾಧನಗಳ ಬಳಕೆಯನ್ನು ಮಾಡದಂತೆ ಮತ್ತು ಯಾವುದೇ ರೀತಿಯ ಮಾದಕ ವಸ್ತುಗಳು, ನಿಷೇದಿತ ವಸ್ತುಗಳ ಬಳಕೆಯನ್ನು ಮಾಡದಂತೆ ತಡೆಗಟ್ಟುವ ನಿಟ್ಟಿನಲ್ಲಿ, ಸೂಕ್ತ ಕಾನೂನು ಕ್ರಮ ಜರುಗಿಸುವ ಸಂಬಂಧ, ಕರ್ನಾಟಕ ಬಂದೀಖಾನೆಗಳ ಅಧಿನಿಯಮ, 1963ರ ಕಲಂ 42ಕ್ಕೆ (ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ಅಧಿನಿಯಮ, 2022) ಅವಶ್ಯಕ ತಿದ್ದುಪಡಿಯನ್ನು ಮಾಡಲಾಗಿರುತ್ತದೆ.

6. ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾನಿರೀಕ್ಷಕರು, ರವರ ನಡುವಳಿಗಳ ಆದೇಶ ಸಂಖ್ಯೆ: CRM-3/03/2022, ದಿನಾಂಕ: 07.02.2022 ಮತ್ತು 17.02.2022ರಲ್ಲಿ ರಾಜ್ಯದ ಕಾರಾಗೃಹಗಳಲ್ಲಿ ಭದ್ರತೆ ಮತ್ತು ಅಪರಾಧಗಳ ನಿಯಂತ್ರಣಕ್ಕಾಗಿ ಸಂಬಂಧಪಟ್ಟ ಪೊಲೀಸ್ ಆಯುಕ್ತರು / ಜಿಲ್ಲಾ ಪೊಲೀಸ್ ಅಧೀಕ್ಷಕರುಗಳ ಅಧ್ಯಕ್ಷತೆಯಲ್ಲಿ ಸಮಿತಿಗಳನ್ನು ಪುನರ್ ರಚಿಸಲಾಗಿರುತ್ತದೆ.

7. ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 37 ಪಿಆರ್‌ಎ 2022, ದಿನಾಂಕ: 17.03.2022ರಲ್ಲಿ ರಾಜ್ಯದ ಕಾರಾಗೃಹಗಳಲ್ಲಿ ಮೊಬೈಲ್ ಫೋನ್ ಗಳು ಮತ್ತು ಇತರೆ ಯಾವುದೇ ರೀತಿಯ ನಿಷೇದಿತ ವಸ್ತುಗಳ ಕಳ್ಳ ಸಾಗಣಿಕೆಯನ್ನು ಮತ್ತು ಅಪರಾಧ ಚಟುವಟಿಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಂಬಂಧಪಟ್ಟ ಪೊಲೀಸ್ ಆಯುಕ್ತರು / ಜಿಲ್ಲಾ ಪೊಲೀಸ್ ಅಧೀಕ್ಷಕರುಗಳು ಹಾಗೂ ಕಾರಾಗೃಹಗಳ ಮುಖ್ಯ ಅಧೀಕ್ಷಕರು / ಅಧೀಕ್ಷಕರುಗಳಿಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಗಿರುತ್ತದೆ.

8. ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ನಿಷೇದಿತ ವಸ್ತುಗಳ ಬಳಕೆ ಶಿಕ್ಷಾರ್ಹ ಅಪರಾಧವಾಗಿರುತ್ತದೆ ಎಂಬುದರ ಬಗ್ಗೆ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ನಿಗದಿತ ನಮೂನೆಯಲ್ಲಿ ಸೂಚನಾ ಫಲಕಗಳನ್ನು ಅಳವಡಿಸಲು ಎಲ್ಲಾ ಕಾರಾಗೃಹಗಳ ಮುಖ್ಯ ಅಧೀಕ್ಷಕರು / ಅಧೀಕ್ಷಕರುಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಗಿರುತ್ತದೆ.

9. ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ಅಧಿನಿಯಮ, 2022 ಜಾರಿಯಾದ ದಿನಾಂಕ: 05.04.2022ರ ನಂತರ ದಿನಾಂಕ: 03.12.2025ರವರೆಗೆ ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ನಿಷೇಧಿತ ವಸ್ತುಗಳ ಕುರಿತು ಒಟ್ಟು 294 ಪ್ರಕರಣಗಳನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ದಾಖಲಿಸಲಾಗಿರುತ್ತದೆ.

10. ದಿನಾಂಕ: 10.11.2025 ರಂದು ಬೆಂಗಳೂರು ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕರ ಹುದ್ದೆಗೆ ಪೊಲೀಸ್ ಅಧೀಕ್ಷಕರಾದ ಶ್ರೀ ಅಂಶು ಕುಮಾರ್, ಭಾ.ಪೊ.ಸೇ ರವರನ್ನು ನೇಮಿಸಲಾಗಿರುತ್ತದೆ.

11. ರಾಜ್ಯದ ಕಾರಾಗೃಹಗಳಲ್ಲಿ ನಡೆದಿರುವ ಕಾನೂನು ಬಾಹಿರ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಶ್ರೀ ಆರ್ ಹಿತೇಂದ್ರ,, ಭಾ.ಪೊ.ಸೇ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು (ಕಾನೂನು ಮತ್ತು ಸುವ್ಯವಸ್ಥೆ) ರವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಿ, ರಾಜ್ಯದ ಕಾರಾಗೃಹಗಳಲ್ಲಿ ನಡೆದಿರುವ ಕಾನೂನು ಬಾಹಿರ ಚಟುವಟಿಕೆಗಳಿಗೆ ಸಂಬಂಧಿಸಿದಂತೆ, ಬಂದಿಗಳಿಗೆ ಕಾನೂನಿನಲ್ಲಿ ಅವಕಾಶ ಇಲ್ಲದಿರುವ ನಿಷೇಧಿತ ವಸ್ತುಗಳನ್ನು ಬಳಸಲು ಅವಕಾಶವಾಗಿರುವ ಬಗ್ಗೆ, ಹಾಗೂ ಇತರೆ ಸವಲತ್ತುಗಳನ್ನು ಬಂದಿಗಳು ಪಡೆದಿರುವ ಬಗ್ಗೆ, ದೃಶ್ಯಮಾಧ್ಯಮಗಳಲ್ಲಿ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಕಳೆದ 05 ವರ್ಷಗಳಲ್ಲಿ ವರದಿ ಆಗಿರುವ ಎಲ್ಲಾ ವಿಡಿಯೋ / ಆಡಿಯೋ ತುಣುಕುಗಳು ಕುರಿತು ಹಾಗೂ ಎಲ್ಲಾ ಕೇಂದ್ರ ಕಾರಾಗೃಹಗಳ ಪರಿಶೀಲನೆ / ವಿಚಾರಣೆ ನಡೆಸಿ, ಸಮಗ್ರ ವರದಿಯನ್ನು ಒಂದು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸುವಂತೆ ದಿನಾಂಕ: 10.11.2025ರಂದು ಆದೇಶವನ್ನು ಹೊರಡಿಸಲಾಗಿರುತ್ತದೆ. ಸಮಿತಿಯು ವರದಿಯನ್ನು ಸಲ್ಲಿಸಿದ ನಂತರ ಕಾರಾಗೃಹಗಳ ಸುಧಾರಣೆಯ ಬಗ್ಗೆ ಹಾಗೂ ತಪ್ಪಿತಸ್ಥ ಅಧಿಕಾರಿ ಮತ್ತು ಸಿಬ್ಬಂದಿಗಳ ವಿರುದ್ಧ ಕಾನೂನು ಮತ್ತು ಶಿಸ್ತುಕ್ರಮ ಜರುಗಿಸಲಾಗುವುದು.

12. ಪ್ರಸ್ತುತ ಇರುವ ಬೆಂಗಳೂರು ಕೇಂದ್ರ ಕಾರಾಗೃಹವನ್ನು 03 ಕೇಂದ್ರ ಕಾರಾಗೃಹಗಳನ್ನಾಗಿ ಕಾರಾಗೃಹ, ಶಿಕ್ಷಾ ಬಂದಿಗಳು, 2) ಕೇಂದ್ರ ಕಾರಾಗೃಹ, ವಿಚಾರಣಾ ಬಂದಿಗಳು ಹಾಗೂ 3) ಕೇಂದ್ರ ಕಾರಾಗೃಹ, ಮಹಿಳಾ ಬಂದಿಗಳು, ವಿಭಜಿಸಲು ಕ್ರಮವಹಿಸಲಾಗುತ್ತಿದೆ. ಇದರಿಂದ ಆಡಳಿತ ವಿಕೇಂದ್ರಿಕರಣ ಹಾಗೂ ಪರಿಣಾಮಕಾರಿ ಮೇಲ್ವಿಚಾರಣೆಯನ್ನು ಮಾಡಲಾಗುವುದು.

13. ದಿನಾಂಕ: 08.11.2025 ಹಾಗೂ 09.11.2025 ರಂದು ವಿವಿಧ ದೃಶ್ಯಮಾಧ್ಯಮಗಳಲ್ಲಿ ಪ್ರಸಾರವಾಗಿರುವ ದೃಶ್ಯಗಳ ಕುರಿತು ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಈಗಾಗಲೇ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮಕೈಗೊಳ್ಳಲು 04 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

14. 05 ವರ್ಷ ಹಾಗೂ ಮೇಲ್ಪಟ ಅಧಿಕಾರಿ / ಸಿಬ್ಬಂದಿಗಳನ್ನು ವರ್ಗಾವಣೆ ಮಾಡಲು ಕ್ರಮ ಕೈಗೊಳ್ಳಲಾಗಿರುತ್ತದೆ.

15. ಕಾರಾಗೃಹದ ಹೊರ ಭಾಗದ ಉಸ್ತುವಾರಿ ಹೊಂದಿರುವ ಕರ್ನಾಟಕ ಕೈಗಾರಿಕಾ ಭದ್ರತಾ ಪಡೆ (ಕೆ.ಎಸ್.ಐ.ಎಸ್.ಎಫ್) ಅಧಿಕಾರಿ / ಸಿಬ್ಬಂದಿಗಳನ್ನು 06 ತಿಂಗಳಿಗೊಮ್ಮೆ ಬದಲಾವಣೆ ಮಾಡಲು ಕ್ರಮ ಕೈಗೊಳ್ಳಲಾಗಿರುತ್ತದೆ.

16. ಖಾಲಿ ಇರುವ ಕೆ.ಎಸ್.ಐ.ಎಸ್.ಎಫ್ ಅಧಿಕಾರಿ / ಸಿಬ್ಬಂದಿಗಳ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮಕೈಗೊಳ್ಳಲಾಗಿರುತ್ತದೆ.

17. ಕೇಂದ್ರ ಕಾರಾಗೃಹ, ಶಿಕ್ಷಾ ಬಂದಿಗಳು ಹಾಗೂ ಕೇಂದ್ರ ಕಾರಾಗೃಹ, ಮಹಿಳಾ ಬಂದಿಗಳು, ಇವುಗಳಿಗೆ ಪ್ರತ್ಯೇಕ ಅಧೀಕ್ಷಕರುಗಳನ್ನು ನೇಮಿಸಲು ಕ್ರಮವಹಿಸಲಾಗುತ್ತಿದೆ.

18. ಖಾಲಿ ಇರುವ ವೀಕ್ಷಕ ಹಾಗೂ ಜೈಲರ್ ಹುದ್ದೆಗಳನ್ನು ನೇಮಕಾತಿ ಮಾಡಲು ಕ್ರಮ ವಹಿಸಲಾಗಿರುತ್ತದೆ.

19. ಹೆಚ್ಚುವರಿಯಾಗಿ ಕಾರಾಗೃಹಕ್ಕೆ ಭದ್ರತಾ ಉಪಕರಣಗಳಾದ ಸಿ.ಸಿ.ಟಿ.ವಿಗಳು ಬ್ಯಾಗೇಜ್ ಸ್ಕ್ಯಾನರ್‌ಗಳನ್ನು ಖರೀದಿಸಲು ಕ್ರಮವಹಿಸಲಾಗುತ್ತಿದೆ.

20. ಹೆಚ್ಚುವರಿಯಾಗಿ ಕಾರಾಗೃಹದ ಬಂದಿಗಳಿಗೆ ಸಂವಹನೆ ಮಾಡುವ ಸಲುವಾಗಿ Prison Call Systems (Land Phones) ಖರೀದಿಸಲು ಕ್ರಮವಹಿಸಲಾಗುತ್ತಿದೆ.

21. ಪ್ರಸ್ತುತ ಇರುವ ಕೇಂದ್ರ ಕಾರಾಗೃಹಕ್ಕೆ ಹೊಂದಿಕೊಂಡಿರುವಂತೆ ನೂತನ ಭದ್ರತಾ ಕೇಂದ್ರ ಕಾರಾಗೃಹವನ್ನು ನಿರ್ಮಿಸಲಾಗಿದ್ದು, ಶೀಘ್ರದಲ್ಲೇ ಆರಂಭಿಸಲು ಕ್ರಮವಹಿಸಲಾಗುವುದು. ಸದರಿ ಕಾರಾಗೃಹದಲ್ಲಿ ಭಯೋತ್ಪಾದಕ ಬಂದಿಗಳು, ನಕ್ಸಲ್ ಬಂದಿಗಳು, ಭೂಗತಪಾತಕಿ ಬಂದಿಗಳು, ರೂಢಾಪರಾಧಿ ಬಂದಿಗಳು, ರೌಡಿ ಬಂದಿಗಳು ಇತರೆ ಯಾವುದೇ ರೀತಿಯಲ್ಲಿ ಭದ್ರತೆ ದೃಷ್ಟಿಯಿಂದ ಇಡಬಹುದಾದಂತಹ ಬಂದಿಗಳನ್ನು ಪ್ರತ್ಯೇಕಿಸಿ, ಹೆಚ್ಚಿನ ಭದ್ರತೆಯಲ್ಲಿ ದಾಖಲು ಮಾಡಲು ಕ್ರಮ ಕೈಗೊಳ್ಳಲಾಗುವುದು.

22. ಶಿವಮೊಗ್ಗ ಕೇಂದ್ರ ಕಾರಾಗೃಹದ ಆವರಣದಲ್ಲಿ ಕೇಂದ್ರ ಗೃಹ ಮಂತ್ರಾಲಯದಿಂದ ಮಂಜೂರಾಗಿರುವ ಗರಿಷ್ಠ ಭದ್ರತಾ ಕಾರಾಗೃಹದ ಕಾಮಗಾರಿಯನ್ನು ಈಗಾಗಲೇ ಆರಂಭಿಸಲಾಗಿದ್ದು, ಪೂರ್ಣಗೊಂಡ ನಂತರ ಇಲ್ಲಿಯೂ ಸಹ ರಾಜ್ಯದ ಕಾರಾಗೃಹಗಳಲ್ಲಿ ದಾಖಲಾಗುವ ಭಯೋತ್ಪಾದಕ ಬಂದಿಗಳನ್ನು, ನಕ್ಸಲ್ ಬಂದಿಗಳನ್ನು, ಭೂಗತಪಾತಕಿ ಬಂದಿಗಳನ್ನು, ರೂಢಾಪರಾಧಿ ಬಂದಿಗಳನ್ನು, ರೌಡಿ ಬಂದಿಗಳನ್ನು, ಹೆಚ್ಚಿನ ಭದ್ರತೆಯಲ್ಲಿ ದಾಖಲು ಮಾಡಲು ಕ್ರಮ ಕೈಗೊಳ್ಳಲಾಗುವುದು.

23. ಪ್ರಧಾನ ಕಛೇರಿಯಲ್ಲಿ ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ಅಳವಡಿಸಲಾಗಿರುವ ಸಿ.ಸಿ.ಟಿ.ವಿ ದೃಶ್ಯಾವಳಿಗಳನ್ನು ವೀಕ್ಷಿಸಲು Command Center ಅನ್ನು ಸ್ಥಾಪಿಸಲು ಕ್ರಮ ವಹಿಸಲಾಗುತ್ತಿದೆ.

24. ರಾಜ್ಯದ ಕಾರಾಗೃಹಗಳಲ್ಲಿ ಅಳವಡಿಸಲಾಗಿರುವ ಭದ್ರತಾ ಉಪಕರಣಗಳನ್ನು Security Audit ಮಾಡಲು ಕ್ರಮವಹಿಸಲಾಗುತ್ತಿದೆ.

25. ಇಲಾಖೆಯ ಹಿರಿಯ ಅಧಿಕಾರಿಗಳು ರಾಜ್ಯದ ಎಲ್ಲಾ ಕಾರಾಗೃಹಗಳಿಗೆ ಮೇಲಿಂದ ಮೇಲೆ ಭೇಟಿ ಮತ್ತು ಪರಿವೀಕ್ಷಣೆ ಕೈಗೊಳ್ಳಲಾಗುತ್ತಿದೆ.

26. ಪೊಲೀಸ್ ಇಲಾಖಾ ವತಿಯಿಂದ ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ಅನಿರೀಕ್ಷಿತ ತಪಾಸಣೆಯನ್ನು ಮಾಡಲಾಗುವುದು.

27. ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳು, ಕಾರಾಗೃಹಗಳಿಗೆ ಭೇಟಿ ನೀಡಿ, ಪರಿಶೀಲಿಸಿ, ಆಡಳಿತ ಮತ್ತು ಭದ್ರತೆಯ ಕುರಿತು ವರದಿಯನ್ನು ನೀಡಲು ತಿಳಿಸಲಾಗಿರುತ್ತದೆ.

28. ಬೀದರ್ ಹಾಗೂ ವಿಜಯಪುರದಲ್ಲಿ ನಿರ್ಮಿಸಲಾಗುತ್ತಿರುವ ನೂತನ ಕೇಂದ್ರ ಕಾರಾಗೃಹಗಳನ್ನು ಶೀಘ್ರದಲ್ಲೇ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

29. ಕಾರಾಗೃಹಗಳ ಭದ್ರತೆ ಹಾಗೂ ಆಡಳಿತ ವಸ್ಥೆಯನ್ನು ಬಲಪಡಿಸಿ, ಬಂದಿಗಳ ಚಲನವಲನಗಳ ಮೇಲೆ ಇನ್ನೂ ಹೆಚ್ಚಿನ ನಿಗಾವಹಿಸಲು ಮೊದಲ ಹಂತವಾಗಿ ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಆಧುನಿಕ ತಂತ್ರಜ್ಞಾನ ಹೊಂದಿರುವ AI-powered Audio-Video Analytics system ಸಿಸಿಟಿವಿ ಕಣ್ಗಾವಲು ವ್ಯವಸ್ಥೆಯನ್ನು ಇ-

ದರಖಾಸ್ತು ಮೂಲಕ ಕ್ರಮವಹಿಸಿ ಅಳವಡಿಸಲಾಗಿದೆ. ಸದರಿ ಕಣ್ಗಾವಲು ವ್ಯವಸ್ಥೆಯನ್ನು ಎಲ್ಲಾ ಕಾರಾಗೃಹಗಳಿಗೂ ವಿಸ್ತರಿಸಲಾಗುವುದು.

30. ರಾಜ್ಯದ ಬೆಂಗಳೂರು, ಮೈಸೂರು, ಕಲಬುರ್ಗಿ, ಬೆಳಗಾವಿ, ಧಾರವಾಡ, ಬಳ್ಳಾರಿ ಮತ್ತು ಮಂಗಳೂರು ಕಾರಾಗೃಹಗಳಲ್ಲಿ ಅಳವಡಿಸಲಾಗಿರುವ 66 ಸಂಖ್ಯೆ ಮೊಬೈಲ್ ಜಾಮರ್ ಗಳನ್ನು ದುರಸ್ಥಿ ಮತ್ತು ಮೇಲ್ದರ್ಜೆಗೇರಿಸಲು ಕಾರ್ಯಾದೇಶ ನೀಡಲಾಗಿರುತ್ತದೆ. ಬೆಂಗಳೂರು, ಕಲಬುರ್ಗಿ, ಬೆಳಗಾವಿ, ಧಾರವಾಡ, ಬಳ್ಳಾರಿ ಮತ್ತು ಮಂಗಳೂರು ಕಾರಾಗೃಹಗಳಲ್ಲಿ ಜಾಮರ್‌ಗಳ ದುರಸ್ಥಿ ಮತ್ತು ಮೇಲ್ದರ್ಜೆಗೇರಿಸುವ ಕಾರ್ಯ ಮುಕ್ತಾಯಗೊಂಡಿದ್ದು, ಮೈಸೂರು ಕೇಂದ್ರ ಕಾರಾಗೃಹದಲ್ಲಿನ ಜಾಮರ್‌ಗಳ ದುರಸ್ಥಿ ಮತ್ತು ಮೇಲ್ದರ್ಜೆ ಕಾರ್ಯ ಅಂತಿಮ ಹಂತದಲ್ಲಿರುತ್ತದೆ.

31. ಕಾರಾಗೃಹಗಳಲ್ಲಿ ಬಂದಿಗಳು ಅಕ್ರಮವಾಗಿ ಮೊಬೈಲ್ ಫೋನ್‌ಗಳನ್ನು ಬಳಸದಂತೆ ತಡೆಗಟ್ಟಲು ಮೊಬೈಲ್ ಸಿಗ್ನಲ್‌ಗಳು ದೊರಕದಂತೆ ಮಾಡಲು ಕೇಂದ್ರ ಗೃಹ ಮಂತ್ರಾಲಯದ ಶಿಫಾರಸ್ಸಿನ ಅನ್ವಯ ಮೊದಲ ಹಂತವಾಗಿ ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ 03 ಸಂಖ್ಯೆ "Towers of Harmonius Call Blocking System (T-HCBS)" ತಂತ್ರಜ್ಞಾನವುಳ್ಳ ಟವರ್‌ಗಳನ್ನು ಅಳವಡಿಸಲಾಗಿರುತ್ತದೆ.

32. ಕಾರಾಗೃಹಗಳಲ್ಲಿ ಮೊಬೈಲ್ ಫೋನ್‌ಗಳು ಮತ್ತು ಇತರೆ ಯಾವುದೇ ರೀತಿಯ ನಿಷೇಧಿತ ವಸ್ತುಗಳ ಕಳ್ಳ ಸಾಗಾಣಿಕೆಯನ್ನು ಹಾಗೂ ಅಪರಾಧ ಚಟುವಟಿಕೆಗಳನ್ನು ತಡೆಗಟ್ಟುವ ಸಲುವಾಗಿ ಕಾರಾಗೃಹದೊಳಗೆ ಪ್ರವೇಶಿಸುವ ಮತ್ತು ಹೊರಬರುವ ವ್ಯಕ್ತಿಗಳನ್ನು ಹಾಗೂ ವಸ್ತುಗಳನ್ನು ಪರಿಶೀಲಿಸಲು ಅತ್ಯಾಧುನಿಕ ಮಾದರಿಯ ತಪಾಸಣಾ ಉಪಕರಣಗಳಾದ X-ray Baggage Scanner, FG-1 Security Pole, HHMD, DFMD, DSMD ಹಾಗೂ Non Linear Junction Detector (NLJD) ಗಳನ್ನು ಒದಗಿಸಲಾಗಿರುತ್ತದೆ.

33. 2024-25 ನೇ ಸಾಲಿನಲ್ಲಿ ರಾಜ್ಯದ ವಿವಿಧ ಕಾರಾಗೃಹಗಳ ಆಡಳಿತ ಮತ್ತು ಭದ್ರತೆಯ ಹಿತದೃಷ್ಟಿಯಿಂದ ಅಗತ್ಯವಿರುವ ಒಟ್ಟು 279 ಸಂಖ್ಯೆ ಬಾಡಿವೋರ್ನ್ ಕ್ಯಾಮರಾ ಮತ್ತು 37 ಸಂಖ್ಯೆ ಡಾಕಿಂಗ್ ಸ್ಟೇಷನ್ ಉಪಕರಣಗಳನ್ನು ಇ-ದರಖಾಸ್ತು ಮೂಲಕ ಖರೀದಿಸಿ ಸರಬರಾಜು ಮಾಡಲಾಗಿರುತ್ತದೆ.

34. ರಾಜ್ಯದ ಕಾರಾಗೃಹಗಳಲ್ಲಿರುವ ಬಂದಿಗಳ ಚಲನ ವಲನಗಳ ಮೇಲೆ ಸೂಕ್ಷ್ಮವಾಗಿ ನಿಗಾ ವಹಿಸಲು ಅಗತ್ಯವಿರುವ ಸಿಸಿಟಿವಿ ಕ್ಯಾಮೆರಾ ಮತ್ತು ಪೂರಕ ಪರಿಕರಗಳನ್ನು ಅಳವಡಿಸಲಾಗಿದೆ.

35. 2024-25 ನೇ ಸಾಲಿನಲ್ಲಿ ಕಾರಾಗೃಹಗಳ ಭದ್ರತೆ ಹಾಗೂ ಆಡಳಿತ ವ್ಯವಸ್ಥೆಗೆ ಅಗತ್ಯವಿರುವ 19 ಸಂಖ್ಯೆ X-ray Baggage Scanner ಮತ್ತು 350 ವಾಕಿಟಾಕಿ ಉಪಕರಣಗಳನ್ನು ಖರೀದಿಸಿ ಒದಗಿಸಲಾಗಿದೆ.

ಸಂಖ್ಯೆ: ಹೆಚ್‌ಡಿ 367 ಪಿಆರ್‌ಎ 2025

**(ಡಾ: ಜಿ. ಪರಮೇಶ್ವರ)**
ಗೃಹ ಸಚಿವರು